## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2017–18ನೇ ಸಾಲಿನ ಪ್ರತಿ ಜಿಲ್ಲಾ ಪಂಚಾಯತಿಗಳಿಗೆ ಜಿಲ್ಲಾ ಪಂಚಾಯತ್ ಅಭಿವೃದ್ಧಿ ಅನುದಾನದವನ್ನು ಒದಗಿಸುವ ಬಗ್ಗೆ.

**ಓದಲಾಗಿದೆ:**

1. 2014–15ನೇ ಸಾಲಿನ ಮಾನ್ಯ ಮುಖ್ಯಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ–278.
2. 2017–18ನೇ ಸಾಲಿನ ಮಾನ್ಯ ಮುಖ್ಯಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ–300.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 79/ವೆಚ್ಚ–6/2017, ದಿನಾಂಕ:01–04–2017.
4. ಯೋಜನೆ, ಸಾಂಖ್ಯಿಕ ಮತ್ತು ಕಾರ್ಯಕ್ರಮ ಸಂಯೋಜನೆ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇ 22 ಜಿಯೋವಿ 2017, ದಿನಾಂಕ:11–05–2017.
5. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/303/ವೆಚ್ಚ–6/2017, ದಿನಾಂಕ:12–05–2017.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಮಾನ್ಯ ಮುಖ್ಯಮಂತ್ರಿಯವರ 2014–15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ 2011ರ ಜನಸಂಖ್ಯೆಗನುಗುಣವಾಗಿ ಶಾಸನಬದ್ಧ ಹೆಚ್ಚುವರಿ ಅನುದಾನವನ್ನು ವಿತರಿಸಲು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ವಾರ್ಷಿಕವಾಗಿ ರೂ.85.00ಕೋಟಿಗಳನ್ನು 2014–15, 2015–16 ಹಾಗೂ 2016–17ನೇ ಆರ್ಥಿಕ ಸಾಲುಗಳಲ್ಲಿ ಬಿಡುಗಡೆಗೊಳಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ(2)ರ ಮಾನ್ಯ ಮುಖ್ಯಮಂತ್ರಿಯವರ 2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಜಿಲ್ಲಾ ಪಂಚಾಯತಿಗಳಿಗೆ ಅಭಿವೃದ್ಧಿ ಅನುದಾನವನ್ನು ರೂ.2.00ಕೋಟಿಗಳಿಂದ ರೂ.4.00ಕೋಟಿಗಳಿಗೆ ಹೆಚ್ಚಿಸಲು ನಿರ್ಧರಿಸಿರುವಂತೆ ಲೆಕ್ಕ ಶೀರ್ಷಿಕೆ:2515–00–101–0–31–050ನ ಲಿಂಕ್ ಕೋಡ್ ಲೆಕ್ಕ ಶೀರ್ಷಿಕೆ:2515–00–196–1–22–300(ಯೋಜನೆ)ರಡಿ ರೂ.12000.00ಲಕ್ಷಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿರುತ್ತದೆ.

2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಅಭಿವೃದ್ಧಿ ಅನುದಾನವನ್ನು ರೂ.2.00ಕೋಟಿಗಳಿಂದ ರೂ.4.00ಕೋಟಿಗಳಿಗೆ ಹೆಚ್ಚಿಸಲು ಘೋಷಿಸಲಾಗಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 129 ಜಿಪಸ 2017(ಪಿ–2), ಬೆಂಗಳೂರು ದಿನಾಂಕ:24–05–2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಅಭಿವೃದ್ಧಿ ಅನುದಾನವನ್ನು ರೂ.2.00ಕೋಟಿಗಳಿಂದ ರೂ.4.00ಕೋಟಿಗಳಿಗೆ ಹೆಚ್ಚಿಸುವಂತೆ ಘೋಷಿಸಿದೆ. ಅದರಂತೆ, ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ:2515–00–101–0–31–050ನ ಲಿಂಕ್ ಡಾಕ್ಯುಮೆಂಟ್ 2515–00–196–1–22–300(ಯೋಜನೆ) ರಡಿಯಲ್ಲಿ ಭರಿಸಲು ಆದೇಶಿಸಿದೆ.

ಈ ಅನುದಾನವನ್ನು ಯೋಜನೆ, ಸಾಂಖ್ಯಿಕ ಮತ್ತು ಕಾರ್ಯಕ್ರಮ ಸಂಯೋಜನೆ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇ 22 ಜಿಯೋವಿ 2017, ದಿನಾಂಕ:11–05–2017ರನ್ವಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/303/ವೆಚ್ಚ–6/2017, ದಿನಾಂಕ:12–05–2017ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/5/2017

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಗೆ:**

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಬೆಂಗಳೂರು.

4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ
5. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು.
7. ವಿಶೇಷಾಧಿಕಾರಿಗಳು (ಜಿ.ಪಂ) ಆರ್ಥಿಕ ಇಲಾಖೆ.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ. ಇಲಾಖೆ.
9. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜ ಭವನ, ಬೆಂಗಳೂರು.
10. ಸಂಬಂಧಪಟ್ಟ ಜಿಲ್ಲಾ ಖಜಾನೆ ಅಧಿಕಾರಿಗಳು.
11. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಕಂಪ್ಯೂಟರ್ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳಿಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್–2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.